ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 08–03–2019**

## ಪತ್ರಿಕಾ ಆಮಂತ್ರಣ

1. ಕೃಷಿ ಬೆಲೆ ಆಯೋಗದ ವತಿಯಿಂದ "ಭಾರತೀಯ ನಾಗರೀಕತೆ ಬಹುತ್ವತೆ ಮತ್ತು ಮಾನವೀಯ ಮೌಲ್ಯಗಳು" ಒಂದು ಸಂವಾದ ಕಾರ್ಯಕ್ರಮ"

**ಪ್ರಾಸ್ತಾವಿಕ ನುಡಿ:**

ಸಿದ್ಧಾರ್ಥ,

ಸಂಸ್ಥಾಪಕರು, ಪೀಪಲ್ ಟ್ರೀ

ಬೆಂಗಳೂರು.

ಸಂವಾದದಲ್ಲಿ ಭಾಗವಹಿಸುವವರು

ಬಿ.ಟಿ.ಲಲಿತನಾಯಕ್, ಡಾ. ಸಿದ್ಧಲಿಂಗಯ್ಯ, ರವೀಂದ್ರ ರೇಷ್ಮೆ ಹಾಗೂ ಇತರ ಗಣ್ಯರು

ದಿನಾಂಕ: 09–03–2019, ಶನಿವಾರ ಸಮಯ : ಬೆಳಿಗ್ಗೆ 10–00 ಗಂಟೆಗೆ.

ಸ್ಥಳ: ಫೈರ್‌ಪ್ಲೈಸ್ ಇಂಟರ್ ಕಲ್ಚಕಲ್ಚರಲ್ ಸೆಂಟರ್, ದಿಣ್ಣಪಾಳ್ಯ ಪೋಸ್ಟ್
ಕಗ್ಗಲೀಪುರ ಪೋಸ್ಟ್, ಬೆಂಗಳೂರು.

ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 8–00 ಗಂಟೆಗೆ ಬೆಂಗಳೂರು ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ: ಮೊಬೈಲ್ – 9482536412

## ಪತ್ರಿಕಾ ಪ್ರಕಟಣೆ

# ಬಡವರ ಕನಸಿನ ಮನೆ ಸಕಾರಗೊಳಿಸಲು ಸಂಕಲ್ಪ
# – ಮುಖ್ಯಮಂತಿ ಹೆಚ್.ಡಿ. ಕುಮಾರಸ್ವಾಮಿ

ಬೆಂಗಳೂರು, ಮಾರ್ಚ್ 8 (ಕರ್ನಾಟಕ ವಾರ್ತೆ)

ಬಡವರ ಕನಸಿನ ಮನೆ ಸಕಾರಗೊಳಿಸಲು ಸರ್ಕಾರ ಕಡಿಮೆ ಬೆಲೆಯಲ್ಲಿ ವಸತಿ ವ್ಯವಸ್ಥೆ ಕಲ್ಪಿಸುತ್ತಿದೆ ಎಂದು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದರು.

ಅವರು ಇಂದು ಬೆಂಗಳೂರು ಉತ್ತರ ತಾಲ್ಲೂಕು ಬ್ಯಾಟರಾಯನಪುರದ ಬೆಟ್ಟಹಲಸೂರು ಗ್ರಾಮ ಪಂಚಾಯಿತಿಯ ಕುದುರೆಗೆರೆ ಗ್ರಾಮದಲ್ಲಿ ವಸತಿ ಇಲಾಖೆಯಡಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದಿಂದ ನಿರ್ಮಿಸಲಾದ ಮುಖ್ಯಮಂತ್ರಿಗಳ 1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯ ಭೂಮಿ ಪೂಜೆಯನ್ನು ನೆರವೇರಿಸಿದ ಮಾತನಾಡಿದರು.

ಈ ಪ್ರದೇಶದಲ್ಲಿ 1 ಲಕ್ಷ ಮನೆಗಳನ್ನು ನಿರ್ಮಿಸಲು ತೀರ್ಮಾನಿಸಲಾಗಿದೆ. ಇದರಿಂದ ಸುಮಾರು 4 ಲಕ್ಷ ಜನರಿಗೆ ವಸತಿ ಕಲ್ಪಿಸಿದಂತಾಗುತ್ತದೆ. ಇದಕ್ಕಾಗಿ ಆನ್‌ಲೈನ್ ಮೂಲಕ ಈಗಾಗಲೇ ಅರ್ಜಿಗಳನ್ನು ಕರೆಯಲಾಗಿದ್ದು, ಅರ್ಧದಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಬಿ.ಪಿ.ಎಲ್ ಕಾರ್ಡು ಹೊಂದಿರುವವರು ಈ ಸೌಲಭ್ಯ ಪಡೆದುಕೊಳ್ಳಲು ಅರ್ಹರು. ಈ ಯೋಜನೆಯಡಿ ಕೇಂದ್ರ ಸರ್ಕಾರ ರೂ. 1.50 ಲಕ್ಷ, ರಾಜ್ಯ ಸರ್ಕಾರ ರೂ. 1.50 ಲಕ್ಷ ಹಾಗೂ ಫಲಾನುಭವಿಗಳು 3 ರಿಂದ 4 ಲಕ್ಷ ರೂ ಒಟ್ಟಾರೆ ಸುಮಾರು 7 ಲಕ್ಷಕ್ಕೆ ಒಂದು ಪ್ಲಾಟ್‌ನ್ನು ಪಡೆದುಕೊಳ್ಳಬಹುದಾಗಿದೆ. 14 ಅಂತಸ್ತುಗಳ ವಸತಿ ಸಂಕೀರ್ಣದಲ್ಲಿ ಗುಣಾತ್ಮಕ ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಫಲಾನುಭವಿಗಳ ಆದಾಯ ಮಿತಿಯನ್ನು ವಾರ್ಷಿಕ 87,000 ರಿಂದ 3 ಲಕ್ಷಗಳವರೆಗೆ ಏರಿಸಲು ಆದೇಶಿಸಲಾಗಿದೆ. ಈಗಾಗಲೇ ಕೆಲವರಿಗೆ ವಸತಿಯ ಹಕ್ಕು ಪತ್ರ ನೀಡಲಾಗಿದ್ದು, ಇನ್ನೂ 50,000 ಜನರಿಗೆ ಮನೆ ಪಡೆಯಲು ಅವಕಾಶವಿದ್ದು, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಬೆಂಗಳೂರು ಅಭಿವೃದ್ಧಿ, ಯೋಜನೆಗಳು, ರೈತರ ಸಾಲಮನ್ನಾ, ಇತ್ಯಾದಿಗಳನ್ನು ಸರ್ಕಾರ ಕೈಗೊಂಡಿದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೃಷ್ಣ ಬೈರೇಗೌಡ ಸರ್ಕಾರ ಜನರ ಪರವಾಗಿದೆ. ರೈತರ 40,000 ಕೋಟಿ ರೂ ಸಾಲ ಮನ್ನಾ ಮಾಡಿದೆ. ಬೆಂಗಳೂರು ಅಭಿವೃದ್ಧಿಗೆ 8000 ಕೋಟಿ ರೂ. ಮೀಸಲಿಟ್ಟಿದೆ.

ಮೆಟ್ರೋ 2ನೇ ಹಾಗೂ 3ನೇ ಹಂತದ ಕಾಮಗಾರಿಗಳಿಗೆ ಅನುಮತಿ ನೀಡಿದೆ. 15 ವರ್ಷಗಳಿಂದ ಬಾಕಿಯಿಂದ ಫೆರಫೆರಲ್ ರಿಂಗ್ ರಸ್ತೆ ನಿರ್ಮಾಣಕ್ಕೆ ಭೂಮಿ ಒತ್ತುವರಿ ನಡೆಸಿದೆ. 9,000 ಕೋಟಿ ರೂ ಗಳಲ್ಲಿ ಎಲಿವೇಟೆಡ್ ಕಾರಿಡಾರ್ ಯೋಜನೆಯನ್ನು ಹೊಸೂರು ರಸ್ತೆಯಿಂದ ಬಳ್ಳಾರಿ ರಸ್ತೆವರೆಗೆ ಕೈಗೊಳ್ಳಲಾಗಿದೆ. ಮೇಲ್ಸೇತುವೆಗಳ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದ್ದು, ಇದರಿಂದ ಟ್ರಾಫಿಕ್ ಸಮಸ್ಯೆಗಳಿಗೆ ಪರಿಹಾರ ದೊರೆಯದೆ ಹಾಗೆಯೇ ಸಬ್ ಅರ್ಬನ್ ರೈಲ್ವೆ ಯೋಜನೆಯನ್ನು ಸಹ ಅನುಷ್ಠಾನಗೊಳಿಸಲಿದೆ ಎಂದರು.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ವಸತಿ ಸಚಿವ ಎಂ.ಟಿ.ಬಿ. ನಾಗರಾಜ್, ಇತರ ಜನಪ್ರತಿನಿಧಿಗಳು, ಬೆಂಗಳೂರು ಜಿಲ್ಲಾಧಿಕಾರಿ ವಿಜಯ್‌ಶಂಕರ್, ವಸತಿ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಚಿವರ ಪ್ರವಾಸ

ಬೆಂಗಳೂರು, ಮಾರ್ಚ್ 8 (ಕರ್ನಾಟಕ ವಾರ್ತೆ)

ಕಂದಾಯ ಸಚಿವ ಆರ್. ವಿ. ದೇಶಪಾಂಡೆ ಅವರು ಮಾರ್ಚ್ 9 ರಂದು ಧಾರವಾಡ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಅಂದೇ ಬೆಂಗಳೂರಿಗೆ ಹಿಂದಿರುಗಲಿದ್ದಾರೆ.

## “ಭಾರತೀಯ ನಾಗರೀಕತೆ ಬಹುತ್ವತೆ ಮತ್ತು ಮಾನವೀಯ ಮೌಲ್ಯಗಳು” ಒಂದು ಸಂವಾದ ಕಾರ್ಯಕ್ರಮ”

ಬೆಂಗಳೂರು, ಮಾರ್ಚ್ 8 (ಕರ್ನಾಟಕ ವಾರ್ತೆ)

ಕೃಷಿ ಬೆಲೆ ಆಯೋಗ ವತಿಯಿಂದ ಬೆಂಗಳೂರಿನ ಹೊರವಲಯದ ದಿಣ್ಣೆಪಾಳ್ಯ ಗ್ರಾಮದ ಕಗ್ಗಲೀಪುರದಲ್ಲಿರುವ Fireflies Intercultural Centre ನಲ್ಲಿ ಮಾರ್ಚ್ 9 ರಂದು ಬೆಳಿಗ್ಗೆ 10.00 ಗಂಟೆಗೆ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಪೀಪಲ್ ಟ್ರೀ ಸಂಸ್ಥಾಪಕರಾದ ಸಿದ್ದಾರ್ಥ ಅವರು ಪ್ರಾಸ್ತಾವಿಕ ನುಡಿಯನು ಮಾಡಲಿದ್ದು, ಶ್ರೀಮತಿ ಬಿ.ಟಿ. ಲಲಿತನಾಯಕ್, ಡಾ ವಸುಂಧರಾ ಭೂಪತಿ, ಪ್ರೊ. ಎಸ್.ಜಿ.

ಸಿದ್ದರಾಮಯ್ಯ, ಬಿ.ಆರ್. ಪಾಟೀಲ್, ಡಾ. ಬಿ.ಎಲ್. ಶಂಕರ್, ಡಾ. ಸಿದ್ದಲಿಂಗಯ್ಯ, ಪ್ರೊ. ಇ. ರಾಧಕೃಷ್ಣ, ಪ್ರೊ ಪಿ.ವಿ. ಕೃಷ್ಣಭಟ್, ಪ್ರೊ ರವಿವರ್ಮಾಕುಮಾರ್, ರವೀಂದ್ರರೇಷ್ಮೆ, ಗಿರೀಶ್ ಕಾಸರವಳ್ಳಿ, ಮುಂತಾದ ಗಣ್ಯರು, ತಜ್ಞರು, ರಾಜಕೀಯ ಸಕ್ರಿಯ ಕಾರ್ಯಕರ್ತರು, ಮತ್ತಿತರರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ. ಟಿ. ಎನ್. ಪ್ರಕಾಶ್ ಕಮ್ಮರಡಿ ಅವರು ಭಾಗವಹಿಸಲಿದ್ದಾರೆ

## ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 8 (ಕರ್ನಾಟಕ ವಾರ್ತೆ)

2019–20 ನೇ ಶೈಕ್ಷಣಿಕ ಸಾಲಿನಲ್ಲಿ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ – 2009 ರ ಸೆಕ್ಷನ್ 12(1)(ಬಿ) ಮತ್ತು ಸೆಕ್ಷನ್ 12(1)(ಸಿ) ಅಡಿಯಲ್ಲಿ ಅಲ್ಪಸಂಖ್ಯಾತವಲ್ಲದ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಪ್ರವೇಶಕ್ಕಾಗಿ ದುರ್ಬಲ ಮತ್ತು ಅನಾನುಕೂಲ ಪರಿಸ್ಥಿತಿಯಲ್ಲಿರುವ ಅರ್ಹ ವಿದ್ಯಾರ್ಥಿಗಳ ಪೋಷಕರಿಂದ ಅರ್ಜಿ ಆಹ್ವಾನಿಸಿದ್ದು, ದಿನಾಂಕ: 18–03–2019 ರಿಂದ 19–03–2019 ರವರೆಗೆ ಪ್ರಾಯೋಗಿಕವಾಗಿ ಅರ್ಜಿ ಸಲ್ಲಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಪ್ರಾಯೋಗಿಕ ಅವಧಿಯಲ್ಲಿ ಸಲ್ಲಿಸಿದ ಅರ್ಜಿಗಳನ್ನು ಸಹ ಮುಂದಿನ ಪ್ರಕ್ರಿಯೆಗೆ ಪರಿಗಣಿಸಲಾಗುವುದು. ದಿನಾಂಕ: 20–03–2019 ರಿಂದ 15–04–2019 ರವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಧಿ ನಿಗದಿಪಡಿಸಲಾಗಿದೆ.

ಅರ್ಜಿ ಸಲ್ಲಿಸುವಲ್ಲಿ ಸಾರ್ವಜನಿಕರಿಗೆ / ಪೋಷಕರಿಗೆ ತಾಂತ್ರಿಕ ತೊಡಕುಂಟಾದಲ್ಲಿ ಇ–ಮೇಲ್ ವಿಳಾಸ rtektk@gmail.com ಮತ್ತು softwaredevelopmentcentre@gmail.com ವಿಳಾಸಕ್ಕೆ ಮೇಲ್ ಸಲ್ಲಿಸಬಹುದಾಗಿದೆ. ಅರ್ಜಿ ಮತ್ತು ಹೆಚ್ಚಿನ ಮಾಹಿತಿಗೆ ಇಲಾಖಾ ವೆಬ್‌ಸೈಟ್ www.schooleducation.kar@nic.in ವಿಳಾಸವನ್ನು ಸಂಪರ್ಕಿಸಬಹುದಾಗಿದೆ.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಮಾರ್ಚ್ 8 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 10-03-2019 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗದಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಅಪರ್ಣಾ ಶಂಕರ್ ಮತ್ತು ತಂಡದವರಿಂದ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## ಫೋನ್-ಇನ್ ಕಾರ್ಯಕ್ರಮ

ಬೆಂಗಳೂರು, ಮಾರ್ಚ್ 8 (ಕರ್ನಾಟಕ ವಾರ್ತೆ)

ಬೆಂಗಳೂರು ಜಲಮಂಡಳಿಯು ಪ್ರತಿ ಶನಿವಾರದಂದು ಬೆಳಗ್ಗೆ 09:00 ರಿಂದ 10:30 ರವರೆಗೆ ಮಂಡಳಿಯ ಅಧ್ಯಕ್ಷರೊಂದಿಗೆ ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಸಂಬಂಧ

ದಿನಾಂಕ:09.03.2019 ರಂದು ಬೆಳಗ್ಗೆ 09:00 ರಿಂದ 10:30 ರವರೆಗೆ ನೇರ ಫೋನ್ ಇನ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಲು ಈ ಪೋನ್-ಇನ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ. ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; **080-22945119.**

## Phone-in program

**BWSSB is conducting a Phone-in program with Chairman BWSSB on every Saturday from 09:00 am to 10:30 am. Accordingly, Phone-in Program with Chairman is held on 09.03.2019 from 09:00 am to 10:30 am. So we are here by requesting the public to discuss and redressal the grievances concerned with the Water Billing, Manhole Overflowing, Meter Reading issues, Improper Water Supply and Sanitary issues. Public can contact through the phone number:080-22945119**.

## ಅರ್ಜಿ ಆಹ್ವಾನ

**ಬೆಂಗಳೂರು, ಮಾರ್ಚ್ 8 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ಮಾಜಿ ಸೈನಿಕರಿಗಾಗಿ ದಿನಾಂಕ 5-3-2019ರ ಅಧಿಸೂಚನೆಗಳ ಪ್ರತ್ಯೇಕ ಎರಡು ಅಧಿಸೂಚನೆಗಳಲ್ಲಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದದ ದ್ವಿತೀಯ ದರ್ಜೆ ಸಹಾಯಕರು -13 ಕಲ್ಯಾಣ ಸಂಘಟಿಕರು -08 ಮತ್ತು ಮಿಲಿಟರಿ ಬಾಲಕರ ವಿದ್ಯಾರ್ಥಿ ನಿಲಯ ಅಧೀಕ್ಷಕರು -06 ಹುದ್ದೆಗಳಿಗೆ ಹಾಗೂ ಹೈದರಾಬಾದ್-ಕರ್ನಾಟಕ ವೃಂದದ ದ್ವಿತೀಯ ದರ್ಜೆ ಸಹಾಯಕರ 01 ಹುದ್ದೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ದಿನಾಂಕ 5-4-2019 ರಂದು ಕೊನೆಯ

ದಿನವಾಗಿದ್ದು, ಹೆಚ್ಚಿನ ಮಾಹಿತಿಯನ್ನು ಆಯೋಗದ ಅಂತರ್ಜಾಲ http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗೆ ಪ್ರಕಟಿಸಲಾಗಿದೆ.